**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 74/2020**

**ಚಾ.ಸಾ. :- 15**
**ಪ್ರಾ.ಸಾ. :- 04**

| | | |
|---|---|---|
| ಹೆಸರು | : | ಸಿದ್ದೇಗೌಡ |
| ತಂದೆಯ ಹೆಸರು | : | ಲೇಟ್ ಚೆನ್ನಯ್ಯ |
| ವಯಸ್ಸು | : | 64 ವರ್ಷ |
| ಉದ್ಯೋಗ | : | ನಿವೃತ್ತ ಎ.ಎಸ್.ಐ., |
| ವಾಸಸ್ಥಳ | : | ಮಂಡ್ಯ. |

**ಪ್ರಮಾಣೀಕರಿಸಲಾದ ದಿನಾಂಕಃ- 12.01.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2019 ರಿಂದ 2021 ರ ಅವಧಿಯಲ್ಲಿ ಶ್ರೀರಂಗಪಟ್ಟಣ ಟೌನ್ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ.ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 07.11.2019 ರಂದು ನಾನು ಠಾಣೆಯಲ್ಲಿ ಕರ್ತವ್ಯದಲ್ಲಿದ್ದಾಗ ನಾಗರಾಜೇಗೌಡ ಆಸ್ಪತ್ರೆಯಿಂದ ಅಪಘಾತಕ್ಕೆ ಸಂಬಂಧಿಸಿದಂತೆ ಮಾಹಿತಿ ಬಂದಿದ್ದು, ನಾನು ಅದೇ ದಿನ ಸದರಿ ಆಸ್ಪತ್ರೆಗೆ ತೆರಳಿ ರಾತ್ರಿ 8.00 ಗಂಟೆಯಿಂದ 8.45 ರವರೆಗೆ ಗಾಯಾಳುವಿನ ಹೇಳಿಕೆ ದೂರನ್ನು ಪಡೆದುಕೊಂಡು, ಪ್ರಕರಣವನ್ನು ದಾಖಲು ಮಾಡಿಕೊಂಡು, ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಹೇಳಿಕೆ ದೂರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-3 ಎಂದು, ಸಾಕ್ಷಿಯ ಸಹಿಯನ್ನು ನಿಪಿ-3(ಎ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-4 ಎಂದು ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು.

ನಂತರ ಕೃತ್ಯ ಸ್ಥಳಕ್ಕೆ ಹೋಗಿ ಪಂಚರ ಸಮಕ್ಷಮದಲ್ಲಿ ಕೃತ್ಯ ಸ್ಥಳದ ಮಹಜರನ್ನು ತಯಾರು ಮಾಡಿರುತ್ತೇನೆ. ಸದರಿ ಮಹಜರನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು. ಮಹಜರ್ ಸಮಯದಲ್ಲಿ ಪಂಚರ ಸಮಕ್ಷಮ ಅಪಘಾತಕ್ಕೆ ಸಂಬಂಧಿಸಿದಂತೆ 2 ವಾಹನಗಳನ್ನು ಅಮಾನತ್ತುಪಡಿಸಿಕೊಂಡಿರುತ್ತೇನೆ. ಲಾರಿಯ 2 ಫೋಟೋಗಳನ್ನು ಈಗ ನೋಡುತ್ತಿದ್ದು ಅದನ್ನು ಒಟ್ಟಾಗಿ ನಿಪಿ-5 ಎಂದು ಗುರುತಿಸಲಾಯಿತು.

ನಂತರ ಗಾಯಾಳು ಮೃತಪಟ್ಟಿದ್ದು, ನ್ಯಾಯಾಲಯದ ಅನುಮತಿ ಪಡೆದು ಕಲಂ.304(ಎ) ನ್ನು ಅಳವಡಿಸಿಕೊಂಡಿರುತ್ತೇನೆ.

ಪಂಚರ ಸಮಕ್ಷಮ ಮೃತರ ಶವಪಂಚನಾಮೆಯನ್ನು ಜರುಗಿಸಿರುತ್ತೇನೆ. ಅದನ್ನು ಈಗ ನೋಡುತ್ತಿದ್ದು ನಿಪಿ-6 ಎಂದು ಗುರುತಿಸಲಾಯಿತು. ಸಾಕ್ಷಿದಾರರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ. ಫೋಟೋಗಳನ್ನು ಪಂಚನಾಮೆಯ ಸಮಯದಲ್ಲಿ ತೆಗೆಯಿಸಿರುತ್ತೇನೆ.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-17 ರವರು ಪಡೆದುಕೊಂಡಿರುತ್ತಾರೆ.

***ಆರೋಪಿ ಪರ ವಕೀಲರು ಪಾಟೀ ಸವಾಲಿಗೆ ಸಮಯ ಕೋರಿದ್ದು, ಯಾವುದೇ ಸಕಾರಣಗಳು ಕಂಡು ಬರದೇ ಇದ್ದುದರಿಂದ ಸದರಿಯವರ ಪ್ರಾರ್ಥನೆಯನ್ನು ತಿರಸ್ಕರಿಸಿ, ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.***

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**